# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 298 (275) |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15-02-2024 |
| ಉತ್ತರಿಸುವವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಇತ್ತೀಚಿಗೆ ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳ ವಿರುದ್ಧ ಆಯೋಗದ ಕಾರ್ಯದರ್ಶಿಯವರು ರಾಜ್ಯಪಾಲರಿಗೆ ದೂರು ಸಲ್ಲಿಸಿರುವುದು ನಿಜವೇ; ಹೌದಾದಲ್ಲಿ, ಅದಕ್ಕೆ ಕಾರಣವೇನು ಹಾಗೂ ಯಾವ ವಿಷಯಗಳ ಕುರಿತು ದೂರು ನೀಡಲಾಗಿದೆ; (ವಿವರ ನೀಡುವುದು) | ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಯವರು ಆಯೋಗದ ಅಧ್ಯಕ್ಷರು ಮತ್ತು ಸದಸ್ಯರುಗಳ ವಿರುದ್ಧ ಮಾನ್ಯ ರಾಜ್ಯಪಾಲರಿಗೆ ದೂರು ಸಲ್ಲಿಸಿದ್ದು, ವಿವರ ಕೆಳಕಂಡಂತಿದೆ.<br><br>'ಆಯೋಗದ ಅಧ್ಯಕ್ಷರು ಮತ್ತು ಸದಸ್ಯರುಗಳ ವರ್ತನೆಯಿಂದ ಕಛೇರಿಯ ದೈನಂದಿನ ಕಾರ್ಯಕಲಾಪಗಳನ್ನು ಮತ್ತು ನೇಮಕಾತಿಯ ಪ್ರಕ್ರಿಯೆಗಳನ್ನು ನಿಗದಿತ ಕಾಲಾವಧಿಯಲ್ಲಿ ಪೂರ್ಣಗೊಳಿಸ ದಿರುವುದರಿಂದ ಹಾಗೂ ಸದರಿಯವರುಗಳು ತಮ್ಮ ಕಛೇರಿಯ ಕಾರ್ಯಗಳನ್ನು ನಿರ್ವಹಿಸಲು ವಿಫಲರಾಗಿ ಆಯ್ಕೆಪಟ್ಟಿಗಳ ಕಡತಗಳಿಗೆ ಸಹಿ/ಅನುಮೋದನೆ ನೀಡದ ಹಿನ್ನೆಲೆಯಲ್ಲಿ, ಹಲವಾರು ಅಂತಿಮ ಆಯ್ಕೆಪಟ್ಟಿಗಳ ಫಲಿತಾಂಶಗಳನ್ನು ಪ್ರಕಟಿಸಲು ಬಾಕಿ ಇರುತ್ತವೆ. ಅಲ್ಲದೇ, ಆಯೋಗದ ಗಣಕ ಕೇಂದ್ರದ ಅಧಿಕಾರಿ/ಸಿಬ್ಬಂದಿಗಳ ಮೇಲೆ ಒತ್ತಡ ಹೇರಲು ಪ್ರಯತ್ನಿಸಿ, ಆಯೋಗದ ಅಧ್ಯಕ್ಷರು ಮತ್ತು ಸದಸ್ಯರುಗಳು ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡಿರುವ ಈ ಕ್ರಮವು ಅಸಂವಿಧಾನಿಕ ಕಾರ್ಯವಾಗಿದ್ದು, ಸದರಿ ಕ್ರಮಕ್ಕೆ ಅವಕಾಶ ನೀಡಿದಲ್ಲಿ ಮುಂದೆ ಪರೀಕ್ಷಾ ಕಾರ್ಯಗಳಲ್ಲಿಯೂ ಸಹ ಇತರೆ ಅಕ್ರಮಗಳಿಗೆ ದಾರಿಯಾಗಬಹುದು. ಈ ನಿಟ್ಟಿನಲ್ಲಿ, ಅಭ್ಯರ್ಥಿಗಳ ಹಿತಾಸಕ್ತಿಯನ್ನು ಕಾಪಾಡಲು ಮತ್ತು ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಲೋಕಸೇವಾ ಆಯೋಗದ ಗೌರವದ ದೃಷ್ಟಿಯಿಂದ ಸದರಿ ಅಂಶಗಳನ್ನು ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರಿಗಳಾದ ಘನತೆವೆತ್ತ ರಾಜ್ಯಪಾಲರವರ ಗಮನಕ್ಕೆ ತರಲಾಗಿದೆ.' |
| ಆ) | ಇವರುಗಳ ಅಂತರಿಕ ಕಲಹದಿಂದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೊಡಕು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಆಯೋಗದ ದೈನಂದಿನ ಕಾರ್ಯ ನಿರ್ವಹಣೆಯಲ್ಲಿ ಯಾವುದೇ ವ್ಯತ್ಯಯ ವಾಗಿರುವುದಿಲ್ಲ. ಆಯೋಗದಲ್ಲಿ ನಿಗಧಿತ ಕಾಲಮಿತಿಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲಾಗುತ್ತಿರುವು ದಲ್ಲದೇ, ಹಲವಾರು ಪರೀಕ್ಷಾ ಪೂರ್ವ ಹಾಗೂ ಪರೀಕ್ಷೋತ್ತರ ಕಾರ್ಯಗಳು ನಿರಂತರವಾಗಿ ನಡೆಯುತ್ತಿರುತ್ತವೆ. |
| ಇ) | ರಾಜ್ಯದ ನಿರುದ್ಯೋಗಿ ಯುವಕ-ಯುವತಿಯರಿಗೆ ಉದ್ಯೋಗ ನೀಡುವಲ್ಲಿ ಅನಗತ್ಯ ವಿಳಂಬ ವಾಗುವುದನ್ನು ತಪ್ಪಿಸಲು ಕರ್ನಾಟಕ ಲೋಕಸೇವಾ ಆಯೋಗದ ಆಂತರಿಕ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಆಯೋಗದ ಅಧಿಕಾರಿ /ನೌಕರರು ನಿಗದಿತ ಕಛೇರಿ ವೇಳೆಯ ಮುನ್ನ ಮತ್ತು ನಂತರ ಹಾಗೂ ಸಾರ್ವತ್ರಿಕ ರಜಾ ದಿನಗಳಲ್ಲಿ ನಿರಂತರವಾಗಿ ಕಾರ್ಯನಿರ್ವಹಿಸು ತ್ತಿರುತ್ತಾರೆ. ನೇಮಕಾತಿ ಪ್ರಕ್ರಿಯೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಲು ತಾತ್ಕಾಲಿಕ ವೇಳಾ ಪಟ್ಟಿಯನ್ನು ಹಾಕಿಕೊಂಡು ಗುರಿಯನ್ನು |

| | | |
|---|---|---|
| | (ವಿವರ ನೀಡುವುದು) | ನಿಗದಿಪಡಿಸಿಕೊಳ್ಳಲಾಗುತ್ತದೆ.<br><br>ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಮತ್ತು ಆಯೋಗಕ್ಕೆ ಸ್ವೀಕೃತವಾಗಿರುವ ಹೊಸ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅಧಿಸೂಚನೆ ಹೊರಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ.ಸಿಆಸುಇ 24 ಎಸ್‌ಎಲ್‌ಎ 2024**

**(ಸಿದ್ದರಾಮಯ್ಯ)**
**ಮುಖ್ಯಮಂತ್ರಿ**